# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2227**
**ಮಾನ್ಯ ಸದಸ್ಯರ ಹೆಸರು : ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನ ಸಭೆಯಿಂದ ಚುನಾಯಿತರಾದವರು)**
**ಉತ್ತರಿಸುವ ದಿನಾಂಕ : 26/03/2026**
**ಉತ್ತರಿಸುವ ಸಚಿವರು. : ಗೃಹ ಸಚಿವರು.**

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಮಕ್ಕಳ ನಾಪತ್ತೆಯ ಹಲವಾರು ಪ್ರಕರಣಗಳು ನಿರಂತರವಾಗಿ ವರದಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕಳೆದ ಮೂರು ವರ್ಷಗಳಲ್ಲಿ ವರದಿಯಾಗಿರುವ ಮಕ್ಕಳ ನಾಪತ್ತೆ ಪ್ರಕರಣಗಳ ಒಟ್ಟು ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು). | ರಾಜ್ಯದಲ್ಲಿ ಮಕ್ಕಳ ನಾಪತ್ತೆಯ ಹಲವಾರು ಪ್ರಕರಣಗಳು ನಿರಂತರವಾಗಿ ವರದಿಯಾಗುತ್ತಿದ್ದು, ಕಳೆದ 3 ವರ್ಷಗಳಲ್ಲಿ 2023 ರಿಂದ 2026 (20.02.2026) ರವರೆಗೆ ವರದಿಯಾಗಿರುವ ಮಕ್ಕಳ ನಾಪತ್ತೆ ಪ್ರಕರಣಗಳ ಜಿಲ್ಲಾವಾರು ಮಾಹಿತಿಯನ್ನು **ಅನುಬಂಧದಲ್ಲಿ** ಒದಗಿಸಲಾಗಿದೆ. |
| ಆ) | ಸದರಿ ವರದಿಯಾಗಿರುವ ಮಕ್ಕಳ ನಾಪತ್ತೆ ಪ್ರಕರಣಗಳಲ್ಲಿ ಹಲವಾರು ಮಕ್ಕಳು ಮಾನವ ಕಳ್ಳಸಾಗಣೆ ಜಾಲಕ್ಕೆ ಸಿಲುಕಿರುವ ಅಪಾಯವಿದ್ದು, ಈ ಕುರಿತು ಸರ್ಕಾರ ಯಾವ ಕ್ರಮ ವಹಿಸಿದೆ; | ಮಕ್ಕಳ ನಾಪತ್ತೆ ಪ್ರಕರಣಗಳಲ್ಲಿ ಮಾನ್ಯ ಸರ್ವೋಚ್ಚ ನ್ಯಾಯಾಲಯದ ರಿಟ್ ಅರ್ಜಿ(ಸಿ): 75/2012 ಬಚ್ಪನ್ ಬಚಾವೋ ಆಂದೋಲನ್ V/s ಯೂನಿಯನ್ ಆಫ್ ಇಂಡಿಯಾ ರ ಆದೇಶ ದಿನಾಂಕ 10/05/2015 ರ ನಿರ್ದೇಶನದಂತೆ ಕಾಣೆಯಾದ ಪ್ರತಿಯೊಂದು ಮಕ್ಕಳ ಪ್ರಕರಣವನ್ನು ಅಪಹರಣಗೊಂಡ ಮಗು ಎಂದು ಪರಿಗಣಿಸಿ ಅಪಹರಣ/ ನಾಪತ್ತೆಯಾದ ಅಥವಾ ಅಪಹರಣಕ್ಕೊಳಗಾದ ಮಕ್ಕಳ ಪ್ರಕರಣಗಳನ್ನು ಕಲಂ 363 IPC/ 137 BNSS ಅಡಿಯಲ್ಲಿ ದಾಖಲಿಸಿ ತನಿಖೆ ನಡೆಸಲಾಗುತ್ತಿದೆ.<br><br>ನಾಪತ್ತೆ ಪ್ರಕರಣಗಳಲ್ಲಿ ಮಕ್ಕಳು ಕಳ್ಳಸಾಗಣಿಕೆಗೆ ಒಳಪಟ್ಟಿರುವುದು ಕಂಡುಬಂದಲ್ಲಿ ಕೂಡಲೆ ಕಳ್ಳ ಸಾಗಾಣಿಕೆದಾರರ ವಿರುದ್ಧ ಕಲಂ.370, 370[ಎ] ಐಪಿಸಿ/ 143, 144 BNS ಮತ್ತು ಇಮ್‌ಮೋರಲ್ ಟ್ರಾಫಿಕಿಂಗ್ ಪ್ರಿವೆನ್‌ಷನ್ ಆಕ್ಟ್ (ಐ.ಟಿ.ಪಿ.ಎ) ಹಾಗೂ ಸಂಬಂಧಪಟ್ಟ ಇತರೆ ಕಾಯ್ದೆ ರೀತ್ಯಾ ಪ್ರಕರಣಗಳನ್ನು ದಾಖಲಿಸಿ, ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಲಾಗುತ್ತಿದೆ. |

<table>
<tr><td>ಇ)</td><td>ಕಳೆದ 3 ವರ್ಷಗಳಿಂದ ಇಲ್ಲಿಯವರೆಗೆ ಮಕ್ಕಳ ಕಳ್ಳಸಾಗಣೆಯ ಪ್ರತ್ಯೇಕ ಪ್ರಕರಣಗಳು ಎಷ್ಟು ದಾಖಲಾಗಿವೆ ;</td><td>ರಾಜ್ಯದಲ್ಲಿ ಕಳೆದ 3 ವರ್ಷಗಳಲ್ಲಿ 2023 ರಿಂದ 2026 (20.02.2026) ಮಕ್ಕಳ ಕಳ್ಳಸಾಗಣೆಯ ಪ್ರತ್ಯೇಕ ಪ್ರಕರಣಗಳ ಸಂಖ್ಯೆಯು ಈ ಕೆಳಕಂಡಂತ್ತಿರುತ್ತದೆ.<br><table><tr><th>ಕ್ರ.ಸಂ</th><th>ವರ್ಷ</th><th>ಮಕ್ಕಳ ಕಳ್ಳಸಾಗಣಿಕೆ ಪ್ರಕರಣಗಳ ಸಂಖ್ಯೆ</th></tr><tr><td>1</td><td>2023</td><td>7</td></tr><tr><td>2</td><td>2024</td><td>17</td></tr><tr><td>3</td><td>2025</td><td>18</td></tr><tr><td>4</td><td>2026</td><td>0</td></tr></table></td></tr>
<tr><td>ಈ)</td><td>ಮಕ್ಕಳ ಕಳ್ಳಸಾಗಣೆಯನ್ನು ತಡೆಯಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು?</td><td>ಮಕ್ಕಳ ಕಳ್ಳಸಾಗಣೆಯನ್ನು ತಡೆಯಲು ಕೈಗೊಂಡ ಕ್ರಮಗಳ ವಿವರಗಳು ಈ ಕೆಳಕಂಡಂತ್ತಿವೆ:-<br>➢ ಮಾನ್ಯ ಉಚ್ಚ ನ್ಯಾಯಾಲಯ ಧಾರವಾಡ ಪೀಠದ ಆದೇಶದಂತೆ ನಾಪತ್ತೆ ಪ್ರಕರಣಗಳನ್ನು ದಾಖಲಿಸಿದ ನಂತರ ತನಿಖಾಧಿಕಾರಿಗಳು ಪತ್ತೆಹಚ್ಚಲು ಕೈಗೊಳ್ಳಬೇಕಾದ / ಅನುಸರಿಸಬೇಕಾದ ಕ್ರಮಗಳ ಕುರಿತು ಪೊಲೀಸ್ ಪ್ರಧಾನ ಕಛೇರಿಯ ಸ್ಥಾಯಿ ಆದೇಶ ಸಂಖ್ಯೆ: 1054 ದಿನಾಂಕ: 21.01.2026 ರಂದು ನಿರ್ದೇಶನ ನೀಡಲಾಗಿದೆ.<br>➢ ಕಾಣೆ/ಅಪಹರಣ ಪ್ರಕರಣ ವರದಿಯಾದ ಕೂಡಲೇ ರಾಜ್ಯದ ಎಲ್ಲಾ ಠಾಣೆಗಳಿಗೆ ಪ್ರಕರಣದ ಆರೋಪಿ ಮತ್ತು ಅಪಹರಿಸಿರುವ ಮಗುವಿನ ಬಗ್ಗೆ, ಯಾವುದೇ ಸುಳಿವು ದೊರೆಯದೆ ಇದ್ದಲ್ಲಿ ಪೋಷಕರ ಒಪ್ಪಿಗೆ ಮೇರೆಗೆ ಪತ್ರಿಕಾ ಪ್ರಕಟಣೆ, ದೂರದರ್ಶನ, ಆಕಾಶವಾಣಿ ಇತ್ಯಾದಿ ಮಾಧ್ಯಮಗಳಲ್ಲಿ ಪ್ರಕಟಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.<br>➢ ರಾಜ್ಯದ ಗಡಿ ಪ್ರದೇಶಗಳಲ್ಲಿ ಮತ್ತು ಬಸ್ ನಿಲ್ದಾಣ/ರೈಲ್ವೆ ನಿಲ್ದಾಣಗಳಲ್ಲಿ ಭಿತ್ತಿ ಪತ್ರಗಳನ್ನು/ಫೋಟೋಗಳನ್ನು ಅಂಟಿಸಿ ಪತ್ತೆ ಕ್ರಮ ಕೈಗೊಳ್ಳಲಾಗುತ್ತಿದೆ.<br>➢ ರಿಜಿನಲ್ ಪಾಸ್‌ಪೋರ್ಟ್ ಆಫೀಸ್ ರವರಿಗೆ ಯಾರಾದರೂ ನವಜಾತ ಮಕ್ಕಳಿಗೆ ಪಾಸ್ ಪೋರ್ಟ್ ಅರ್ಜಿ ಸಲ್ಲಿಸಿರುವರೇ ಎಂಬ ಬಗ್ಗೆ ಪರಿಶೀಲನೆ ಮಾಡಲಾಗುತ್ತಿದೆ.<br>➢ ಲುಕ್ ಔಟ್ ನೋಟೀಸ್ ನೀಡುವುದು, ಅಕ್ಕ-ಪಕ್ಕದ ಜಿಲ್ಲೆಗಳಲ್ಲಿ ಕಾಣೆಯಾದ ಮಕ್ಕಳ ಕುರಿತು ಹುಡುಕಾಟ ನಡೆಸಲಾಗುತ್ತಿದೆ.<br>➢ ಅಧಿಕಾರಿಗಳ ತಂಡವನ್ನು ನಿರ್ಮಿಸಿ ಎಲ್ಲಾ ಕಡೆ ಹುಡುಕಾಟ ನಡೆಸುವುದು, ಅಕ್ಕ-ಪಕ್ಕದ ಜಿಲ್ಲೆಗಳ ಪೊಲೀಸ್ ಠಾಣೆಗಳಲ್ಲಿ ದಾಖಲಾದ ಅಪರಿಚಿತ ಶವಗಳ UDR ಪ್ರಕರಣಗಳನ್ನು ಪರಿಶೀಲಿಸುವುದು.<br>➢ ಮಕ್ಕಳ ಕಳ್ಳ ಸಾಗಾಣಿಕೆಯಾಗಿರುವ ಸಾಧ್ಯತೆ ಇದ್ದಲ್ಲಿ ಕಳ್ಳ ಸಾಗಾಣಿಕೆ ಮಾಡುವವರ ಬಗ್ಗೆ ಬಾತ್ಮಿದಾರರಿಂದ ಮಾಹಿತಿ ಸಂಗ್ರಹಿಸಿ ಕಳ್ಳ ಸಾಗಾಣಿಕೆದಾರರ ವಿರುದ್ಧ ಕಲಂ 370, 370(ಎ) ಐಪಿಸಿ ಮತ್ತು ಇಮ್‌ಮೋರಲ್ ಟ್ರಾಫಿಕಿಂಗ್ ಪ್ರಿವೆನ್ಸ್</td></tr>
</table>

| | | |
|---|---|---|
| | | ಆಕ್ಟ್ (ಐ.ಟಿ.ಪಿ.ಎ) ಹಾಗೂ ಸಂಬಂಧಪಟ್ಟ ಇತರೆ ಕಾಯ್ದೆ ರೀತ್ಯಾ ಪ್ರಕರಣಗಳನ್ನು ದಾಖಲಿಸಿ, ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಲಾಗುತ್ತಿದೆ.<br>➢ ಮಾನವ ಕಳ್ಳಸಾಗಾಣಿಕೆಯ ಪ್ರಕರಣಗಳ ತನಿಖೆಯನ್ನು ಸಮರ್ಥವಾಗಿ ನಿರ್ವಹಿಸಲು ತನಿಖಾಧಿಕಾರಿಗಳಿಗಾಗಿ ನಿರ್ದಿಷ್ಟ ಕಾರ್ಯವಿಧಾನವನ್ನು ಸಿದ್ಧಪಡಿಸಿ, ಸ್ಥಾಯಿ 1027 ಆದೇಶದ ಮೂಲಕ ರಾಜ್ಯ ಎಲ್ಲಾ ಘಟಕಾಧಿಕಾರಿಗಳಿಗೆ ಕಳುಹಿಸಿಕೊಡಲಾಗಿದೆ.<br>➢ ಅಪರಾಧ ಚಟುವಟಿಕೆಗಳಲ್ಲಿ ಹಾಗೂ ಮಕ್ಕಳ ಭಿಕ್ಷಾಟನೆಯಲ್ಲಿ ತೊಡಗಿಸಿರುವಂತಹ ಅಪರಿಚಿತ ವ್ಯಕ್ತಿಗಳು ಕಂಡು ಬಂದಲ್ಲಿ ಠಾಣೆಗೆ ಮಾಹಿತಿ ನೀಡುವಂತೆ ಸೂಚಿಸಲಾಗಿರುತ್ತದೆ.<br>➢ ಬಸ್ ನಿಲ್ದಾಣ, ರೈಲು ನಿಲ್ದಾಣ, ವಿಮಾಣ ನಿಲ್ದಾಣ ಮತ್ತು ಜನನಿಬಿಡ ಸ್ಥಳಗಳಲ್ಲಿ ಹಾಗೂ ಪ್ರಮುಖ ಸ್ಥಳಗಳನ್ನು ಗುರುತಿಸಿ ಸಿಸಿ ಟಿ.ವಿ ಕ್ಯಾಮೆರಾಗಳನ್ನು ಅಳವಡಿಸಿದ್ದು, ಅವುಗಳ ಸಹಾಯದಿಂದ ಮಹಿಳೆಯರ ಮತ್ತು ಮಕ್ಕಳ ಸಾಗಾಟ ಮಾಡುವವರ ಮೇಲೆ ನಿಗಾವಹಿಸಲಾಗಿದೆ.<br>➢ ಕೃತ್ಯ ನಡೆದ ಸ್ಥಳದಲ್ಲಿ ಹಾಗೂ ಸುತ್ತಾಮುತ್ತ ಲಭ್ಯವಿದ್ದ ಸಿಸಿಟಿವಿ ಕ್ಯಾಮೆರದ ಫುಟೇಜ್‌ಗಳನ್ನು ಪರಿಶೀಲನೆ ಮಾಡಲಾಗುತ್ತದೆ.<br>➢ ಲಭ್ಯವಿರುವ ಮಾಹಿತಿಯೊಂದಿಗೆ (ಚಹರೆ) ಟ್ರಾಕ್ ಚೈಲ್ಡ್ ತಂತ್ರಾಂಶದಲ್ಲಿ ಮಗುವಿನ ದೈಹಿಕ ಚಹರೆಯನ್ನು ಮಿಸ್ಸಿಂಗ್ ಪರ್ಸನ್ ಬ್ಯೂರೋಗೆ ಕಳುಹಿಸಿ ಕ್ರಮ ಕೈಗೊಳ್ಳಲಾಗುತ್ತಿದೆ.<br>➢ ಮಾನವ ಕಳ್ಳಸಾಗಾಣಿಕೆ ಪ್ರಕರಣಗಳನ್ನು ತಡೆಗಟ್ಟಲು ಮಾನವ ಕಳ್ಳಸಾಗಾಣಿಕೆ ನಿಷೇಧ ಘಟಕ ಹಾಗೂ ಸಂಬಂಧಪಟ್ಟ ಎಸ್‌ಸಿಆರ್‌ಬಿ (ರಾಜ್ಯ ಅಪರಾಧ ದಾಖಲಾತಿ ಘಟಕ) ಮತ್ತು ಎನ್‌ಸಿಆರ್‌ಬಿ (ರಾಷ್ಟ್ರೀಯ ಅಪರಾಧ ದಾಖಲೆಗಳ ಬ್ಯೂರೋ) ಪೊಲೀಸ್ ಅಧಿಕಾರಿಗಳನ್ನು ಸಂಪರ್ಕಿಸಿ ಮಾನವ ಕಳ್ಳಸಾಗಾಣಿಕೆ ಅಪರಾಧಗಳ ಬಗ್ಗೆ ಮಾಹಿತಿ ಸಂಗ್ರಹಿಸಲಾಗುತ್ತಿದೆ.<br>➢ ಮಿಷನ್ ವಾತ್ಸಲ್ಯ ಪೋರ್ಟಲ್, KSP ವೆಬ್ ಸೈಟ್, Cri-MAC ಪೋರ್ಟಲ್ ಮುಂತಾದ ತಾಂತ್ರಿಕ ವಿಧಾನಗಳನ್ನು ಮಕ್ಕಳ ಅಪರಾಧ ಪತ್ತೆ ಮತ್ತು ತಡೆಗಟ್ಟುವಲ್ಲಿ ಬಳಸಿಕೊಳ್ಳಲಾಗುತ್ತಿದೆ.<br>➢ ಅಪಹರಣಕ್ಕೊಳಗಾದ ಮಗುವಿನ ಭಾವಚಿತ್ರಗಳ ನೋಟಿಸುಗಳನ್ನು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಅಂಟಿಸುವ ಮೂಲಕ, ಸಾಮಾಜಿಕ ಜಾಲತಾಣಗಳಲ್ಲಿ, ಎಲ್ಲಾ ವರ್ಗದ ಜನತೆಯನ್ನೂ ತಲುಪುವಂತೆ ವ್ಯಾಪಕ ಪ್ರಚಾರ ನೀಡಿ ಸಾರ್ವಜನಿಕರ ಸಹಕಾರದಿಂದ ಈ ಪ್ರಕರಣದಲ್ಲಿ ಅಪಹರಣಕ್ಕೊಳಗಾದ ಮಗು ಮತ್ತು ಆರೋಪಿಯನ್ನು ಪತ್ತೆ ಮಾಡಲಾಗುತ್ತದೆ.<br>➢ ರಾಜ್ಯದಲ್ಲಿ ಮಾನವ ಕಳ್ಳಸಾಗಾಣಿಕೆಯನ್ನು ತಡೆಗಟ್ಟಲು ರಾಜ್ಯದಲ್ಲಿ ಒಟ್ಟಾರೆ 43 ಎಹೆಚ್‌ಟಿಯು (Anti Human |

| | | |
|---|---|---|
| | | Trafficking Unit) ಗಳನ್ನು ಸ್ಥಾಪಿಸಲಾಗಿದೆ. ಇವುಗಳನ್ನು ಮಹಿಳಾ ಪೊಲೀಸ್ ಠಾಣೆಗಳಾಗಿಯು ಸಹ ಕಾರ್ಯನಿರ್ವಹಿಸುತ್ತಿದೆ.<br>➢ ಕಾಣೆಯಾದ ಪ್ರಕರಣಗಳ ಪೈಕಿ 60 ದಿನದೊಳಗೆ ಪತ್ತೆಯಾಗದ ಪ್ರಕರಣಗಳನ್ನು ಪರಿಣಾಮಕಾರಿ ತನಿಖೆಗಾಗಿ ವಿಶೇಷ ಘಟಕವಾದ ಎಹೆಚ್‌ಟಿಯು (Anti Human Trafficking Unit) ಘಟಕಗಳಿಗೆ ವರ್ಗಾವಣೆ ಮಾಡಲಾಗುತ್ತಿದೆ.<br>➢ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿನ ಬೀಟ್ ಸಿಬ್ಬಂದಿಗಳ ಮೂಲಕ ಹಾಗೂ ಬೀಟ್ ಗ್ರೂಪ್ ಸದಸ್ಯರ ಮೂಲಕ ಮಾನವ ಕಳ್ಳಸಾಗಾಣಿಕೆ ಬಗ್ಗೆ ಮುಂಚಿತವಾಗಿ ಮಾಹಿತಿ ಸಂಗ್ರಹಿಸಿ ಸೂಕ್ತ ಮುಂಜಾಗ್ರತಾ ಕ್ರಮ ಕೈಗೊಳ್ಳುವ ವ್ಯವಸ್ಥೆ ಮಾಡಲಾಗಿದೆ. |

**ಸಂಖ್ಯೆ: HD 44 PCQ 2026**

(ಡಾ: ಜಿ. ಪರಮೇಶ್ವರ)
ಗೃಹ ಸಚಿವರು

ಅನುಬಂಧ

Children Missing (363 IPC/ 137 (2) BNS)

| Sl.No. | Unit Name | 2023 | 2024 | 2025 | 2026 (20-02-2026) |
|---|---|---|---|---|---|
| | | Children missing | Children missing | Children missing | Children missing |
| 1 | Bagalkot | 18 | 37 | 35 | 8 |
| 2 | Ballari | 46 | 45 | 43 | 8 |
| 3 | Belagavi City | 37 | 35 | 36 | 9 |
| 4 | Belagavi Dist | 76 | 48 | 68 | 16 |
| 5 | Bengaluru City | 1115 | 1163 | 1136 | 160 |
| 6 | Bengaluru Dist | 212 | 254 | 270 | 36 |
| 7 | Bengaluru South | 100 | 101 | 116 | 17 |
| 8 | Bidar | 29 | 53 | 84 | 12 |
| 9 | Chamarajanagar | 30 | 27 | 40 | 8 |
| 10 | Chickballapura | 46 | 65 | 48 | 7 |
| 11 | Chikkamagaluru | 70 | 70 | 92 | 12 |
| 12 | Chitradurga | 80 | 89 | 86 | 19 |
| 13 | Dakshina Kannada | 15 | 24 | 17 | 4 |
| 14 | Davanagere | 101 | 112 | 99 | 20 |
| 15 | Dharwad | 11 | 10 | 23 | 6 |
| 16 | Gadag | 28 | 30 | 28 | 8 |
| 17 | Hassan | 76 | 92 | 112 | 25 |
| 18 | Haveri | 49 | 50 | 52 | 16 |
| 19 | Hubballi Dharwad City | 36 | 41 | 39 | 3 |
| 20 | K.G.F | 14 | 35 | 24 | 1 |
| 21 | Kalaburagi | 40 | 65 | 56 | 12 |
| 22 | Kalaburagi City | 33 | 58 | 54 | 5 |
| 23 | Karnataka Railways | 2 | 3 | 4 | 0 |
| 24 | Kodagu | 36 | 36 | 40 | 11 |
| 25 | Kolar | 70 | 74 | 76 | 12 |
| 26 | Koppal | 30 | 34 | 38 | 6 |
| 27 | Mandya | 99 | 94 | 99 | 15 |
| 28 | Mangaluru City | 35 | 47 | 36 | 9 |
| 29 | Mysuru City | 48 | 58 | 67 | 17 |
| 30 | Mysuru Dist | 57 | 96 | 146 | 19 |
| 31 | Raichur | 25 | 34 | 43 | 12 |
| 32 | Shivamogga | 97 | 94 | 107 | 20 |
| 33 | Tumakuru | 143 | 145 | 175 | 24 |
| 34 | Udupi | 30 | 30 | 31 | 5 |
| 35 | Uttara Kannada | 31 | 54 | 58 | 7 |
| 36 | Vijayanagara | 35 | 41 | 52 | 12 |
| 37 | Vijayapura | 31 | 42 | 78 | 12 |
| 38 | Yadgir | 9 | 22 | 12 | 6 |
| | **Grand Total** | 3040 | 3408 | 3620 | 599 |